ದಾವೋಸ್ ನಲ್ಲಿ ನಡೆಯುತ್ತಿರುವ ವಿಶ್ವ ಆರ್ಥಿಕ ಸಂಸ್ಥೆಯ ಸಮ್ಮೇಳನ ಸಂದರ್ಭದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ವಿಶ್ವ ಬ್ಯಾಂಕ್ ಅಧ್ಯಕ್ಷ ಅಜಯ್ ಬಂಗ ಸೇರಿದಂತೆ ನಾನಾ ದೇಶಗಳ ಆರ್ಥಿಕ ತಜ್ಞರ ಜತೆ ಬುಧವಾರ ಸಮಾಲೋಚನೆ ನಡೆಸಿದರು.

ಕ್ರೀಡೆಯಲ್ಲಿ ದೇಶ ಪ್ರತಿನಿಧಿಸುವುದು ಹೆಮ್ಮೆ ವಿಚಾರ: ಧನಲಕ್ಷ್ಮಿ ಪೂಜಾರಿ

ಉದಯಕಾಲ ನ್ಯೂಸ್, ಯಲಹಂಕ: 'ಕಬಡ್ಡಿ ಕ್ರೀಡೆಯಲ್ಲಿ ಸೋಲು-ಗೆಲುವು, ಆಸೆ-ನಿರಾಸೆ, ಏಳು-ಬೀಳು ಎಲ್ಲವನ್ನೂ ಕಂಡಿದ್ದೇನೆ. ಆದರೆ ಕಬಡ್ಡಿಯಲ್ಲಿ ನಮ್ಮ ದೇಶ, ರಾಜ್ಯ, ನಮ್ಮ ಜಿಲ್ಲೆಯನ್ನು ಪ್ರತಿನಿಧಿಸಿ ರಾಷ್ಟ್ರಧ್ವಜ ಎತ್ತಿ ಹಿಡಿಯ ಬೇಕೆಂಬ ನನ್ನ ಬಾಲ್ಯದ ಕನಸು ಈಡೇರಿರುವ ಬಗ್ಗೆ ಹೆಮ್ಮೆಯಿದೆ ಎಂದು ಒಲಿಂಪಿಕ್ ಪಂದ್ಯಾವಳಿಯಲ್ಲಿ ಭಾರತವನ್ನು ಪ್ರತಿನಿಧಿಸಿದ್ದ ಕಬಡ್ಡಿ ತಂಡದ ಆಟಗಾರ್ತಿ ಧನಲಕ್ಷ್ಮಿ ಪೂಜಾರಿ ಅವರು ಹೇಳಿದರು. ದಕ್ಷಿಣ ಕನ್ನಡಿಗರ ಸಾಂಸ್ಕೃತಿಕ ಸಂಘ, ಯಲಹಂಕದ ವಾರ್ಷಿಕ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ತಾವು ಬದುಕಿನಲ್ಲಿ ಸಾಗಿಬಂದ ಹಾದಿಯನ್ನು ಸ್ಮರಿಸಿಕೊಂಡರು. ಕ್ರೀಡಾಕೂಟದಲ್ಲಿ ಹಲವು ದೇಸೀ ಕ್ರೀಡೆಗಳನ್ನು ಆಯೋಜಿಸಲಾಗಿತ್ತು. ದಕ್ಷಿಣ ಕನ್ನಡಿಗರ ಸಾಂಸ್ಕೃತಿಕ ಸಂಘದ ಅಧ್ಯಕ್ಷರಾದ ಶೇಖರ್ ಶೆಟ್ಟಿ, ಪ್ರಧಾನ ಕಾರ್ಯದರ್ಶಿ ಅಶೋಕ್ ಹೆಬ್ಬಾರ್, ಉಪಾಧ್ಯಕ್ಷ ಜಯರಾಮ್ ಶೆಟ್ಟಿ, ನಿಕಟ ಪೂರ್ವ ಅಧ್ಯಕ್ಷರಾದ ಕೃಷ್ಣ ಕುಮಾರ್ ಹೆಗ್ಡೆ, ಪೂರ್ವ ಅಧ್ಯಕ್ಷರಾದ ಅಲಂಗಾರು ಬಾಬು ಶೆಟ್ಟಿ, ಪರಿಕ ಭಾಸ್ಕರ್ ಶೆಟ್ಟಿ, ಮಹಿಳಾ ಉಪಾಧ್ಯಕ್ಷೆ ಲತಾ ಹರೀಶ್ ಶೆಟ್ಟಿ, ಕೋಶಾಧಿಕಾರಿ ವಿಶ್ವನಾಥ್ ಶೆಟ್ಟಿ, ಮತ್ತಿತರರಿದ್ದರು.

ಇಂದಿರಾ ಕ್ಯಾಂಟೀನ್ ಯೋಜನೆಯ ಮೇಲ್ವಿಚಾರಣೆ, ಗುಣಮಟ್ಟದ ಪರಿಶೀಲನೆ ಮತ್ತು ಪರಿಣಾಮಕಾರಿ ಅನುಷ್ಠಾನದ ರಾಜ್ಯ ಮಟ್ಟದ ಸ್ಟೀರಿಂಗ್ ಸಮಿತಿ ಅಧ್ಯಕ್ಷರಾಗಿ ಬುಧವಾರ ಪದಗ್ರಹಣ ಮಾಡಿದ ಪಿ.ಸಿ.ಪ್ರಸನ್ನ ಅವರನ್ನು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ಅಭಿನಂದಿಸಿ ಶುಭ ಕೋರಿದರು.

ಶ್ರೀಗಳ 7ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಸಚಿವ ಈಶ್ವರ ಖಂಡ್ರೆ ಬಣ್ಣನೆ

ಡಾ.ಶಿವಕುಮಾರ ಶ್ರೀಗಳು ವಿಶ್ವಗುರು

ಉದಯಕಾಲ ನ್ಯೂಸ್, ಬೆಂಗಳೂರು:
ನಡೆದಾಡುವ ದೇವರೆಂದೇ ಖ್ಯಾತರಾಗಿದ್ದ ಡಾ. ಶಿವಕುಮಾರ ಮಹಾಸ್ವಾಮೀಜಿ ಅವರು ಕೇವಲ ನಾಡಿಗೆ ಮಾತ್ರವಲ್ಲ, ಇಡೀ ಜಗತ್ತಿಗೇ ಗುರುವಾಗಿದ್ದರು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ವೀರಶೈವ ಲಿಂಗಾಯತ ಮಹಾಸಭಾದ ನೂತನ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಬಿ. ಖಂಡ್ರೆ ಹೇಳಿದರು.

ಬುಧವಾರ ಮಹಾಸಭಾದಲ್ಲಿ ಲಿಂಗೈಕ್ಯ ಡಾ. ಶಿವಕುಮಾರ ಮಹಾಸ್ವಾಮೀಜಿ ಅವರ 7ನೇ ಪುಣ್ಯಸ್ಮರಣೆ ಅಂಗವಾಗಿ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಸಿದ್ದಗಂಗಾಮಠದ ಪೀಠಾಧ್ಯಕ್ಷರಾಗಿದ್ದ ಅವರು ಆಶ್ರಯ, ಅನ್ನ, ಅಕ್ಷರ ಎಂಬ ತ್ರಿವಿಧ ದಾಸೋಹದಿಂದ ಎಲ್ಲ ಜಾತಿ, ಧರ್ಮ, ಜನಾಂಗದ ಬಡವರ ಪಾಲಿಗೆ ಕಾಮಧೇನು, ಕಲ್ಪವೃಕ್ಷವಾಗಿದ್ದರು ಎಂದು ಹೇಳಿದರು.



ಹಾನಗಲ್ ಕುಮಾರೇಶ್ವರರು 122 ವರ್ಷಗಳ ಹಿಂದೆ ಸ್ಥಾಪಿಸಿದ ವೀರಶೈವ ಮಹಾಸಭಾದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದ ಸ್ವಾಮೀಜಿ ವೀರಶೈವ ಬೇರೆ ಅಲ್ಲ, ಲಿಂಗಾಯತ ಬೇರೆ ಅಲ್ಲ, ನಾವೆಲ್ಲರೂ ಒಂದೆ, ಪರಶಿವನೇ ನಮ್ಮೆಲ್ಲರ ತಂದೆ ಎಂದು ಪ್ರತಿಪಾದಿಸಿದ್ದರು ಎಂದು ಸ್ಮರಿಸಿದರು.

ಶತಾಯುಷಿಗಳಾಗಿದ್ದ ಡಾ. ಶಿವಕುಮಾರ ಸ್ವಾಮೀಜಿ ಅವರು ಧಾರ್ಮಿಕ ಕೇಂದ್ರವಾಗಿದ್ದ ಸಿದ್ದಗಂಗೆಯನ್ನು ಸರಸ್ವತಿಯ ನೆಲೆವೀಡನ್ನಾಗಿ ಮಾಡಿ, ಲಕ್ಷಾಂತರ ವಿದ್ಯಾರ್ಥಿಗಳಿಗೆ ಲೌಕಿಕ ಶಿಕ್ಷಣದ ಜೊತೆಗೆ ನೈತಿಕ ಶಿಕ್ಷಣವನ್ನೂ ನೀಡಿ ದೇಶದ ಸತ್ಪ್ರಜೆಗಳನ್ನಾಗಿ ರೂಪಿಸಿದರು. ಆ ಮೂಲಕ ನವ ಕರ್ನಾಟಕ ನಿರ್ಮಾಣಕ್ಕೆ ಹಾಗೂ ಸದೃಢ ರಾಷ್ಟ್ರ ನಿರ್ಮಾಣಕ್ಕೆ ದೊಡ್ಡ ಕೊಡುಗೆ ನೀಡಿದ್ದಾರೆ ಎಂದರು.

ಶಿವರಾತ್ರಿಯ ಸಂದರ್ಭದಲ್ಲಿ ಕ್ಷೇತ್ರದಲ್ಲಿ ನಡೆಯುತ್ತಿದ್ದ ಜಾತ್ರೆಯ ವೇಳೆ ರೈತರಿಗೆ ಮತ್ತು ಗ್ರಾಮೀಣ ಜನರಿಗೆ ವೈಜ್ಞಾನಿಕ ಆವಿಷ್ಕಾರಗಳ, ಆಧುನಿಕ ಬೇಸಾಯ ಪದ್ಧತಿಗಳ ಬಗ್ಗೆ ಮಾಹಿತಿ ಕೊಡಿಸುವ ಮೂಲಕ ರೈತರ, ಗ್ರಾಮೀಣರ ಪ್ರಗತಿಗೂ ಕಾರಣವಾಗಿದ್ದರು ಎಂದರು.

ಪುಣ್ಯಪುರುಷರ ಜಯಂತಿ, ಪುಣ್ಯಸ್ಮರಣೆ ಆಚರಣೆಯಿಂದ ಅವರ ಆದರ್ಶ, ಬೋಧನೆಗಳನ್ನು ಸ್ಮರಿಸುವ ಅವಕಾಶ ಲಭಿಸುತ್ತದೆ. ಇದು ಅವರ ಆದರ್ಶಗಳ ಪಾಲನೆಗೆ ಸೋಪಾನವೂ ಆಗುತ್ತದೆ ಎಂದು ಈಶ್ವರ ಖಂಡ್ರೆ ಅಭಿಪ್ರಾಯಪಟ್ಟರು. ಶಾಸಕ ಬಿ.ಆರ್. ಪಾಟೀಲ್, ಸಭಾದ ಕಾರ್ಯದರ್ಶಿ ರೇಣುಕಪ್ರಸನ್ನ, ರಾಜ್ಯ ಪ್ರಧಾನ ಕಾರ್ಯದರ್ಶಿ ಸಾಗರನಹಳ್ಳಿ ನಟರಾಜ್ ಮತ್ತಿತರರು ಪಾಲ್ಗೊಂಡಿದ್ದರು.

ಬಾರ್ ಕೌನ್ಸಿಲ್ ಚುನಾವಣೆಯಲ್ಲಿ ಮೀಸಲಾತಿಗೆ ಹೋರಾಟ

ಎಸ್‌ಸಿ, ಎಸ್‌ಟಿ ವಕೀಲರ ಸಂಘದ ಸಮಾವೇಶದಲ್ಲಿ ಮುನಿಯಪ್ಪ

ಉದಯಕಾಲ ನ್ಯೂಸ್, ಬೆಂಗಳೂರು:
ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ವಕೀಲರ ಸಂಘದ ರಾಜ್ಯಮಟ್ಟದ ಸಮಾವೇಶ ಹಾಗೂ 2ನೇ ವರ್ಷದ ವಾರ್ಷಿಕೋತ್ಸವ ಕುರಿತು ಚರ್ಚಿಸಲು ಗಾಂಧಿ ನಗರದ ಕಾನಿಷ್ಕಾ ಹೋಟೆಲ್‌ನಲ್ಲಿ ಬುಧವಾರ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ಮಾತನಾಡಿದ ಸಂಘದ ಅಧ್ಯಕ್ಷ ಎಂ.ಮುನಿಯಪ್ಪ, ದೇಶದ ಎಲ್ಲ ಬಾರ್ ಕೌನ್ಸಿಲ್‌ನಲ್ಲಿ ಮತ್ತು ಅದರ ಚುನಾವಣೆಗಳಲ್ಲಿ ಮೀಸಲಾತಿ ಇಲ್ಲ, ಅದಕ್ಕಾಗಿ ಹೋರಾಟ ಮಾಡಬೇಕಿದೆ. ಹಾಗೆಯೇ ಬಾರ್ ಕೌನ್ಸಿಲ್ ಮತ್ತು ವಕೀಲರ ಚುನಾವಣೆಯಲ್ಲಿ ಪ. ಜಾತಿ, ಪಂಗಡದ ಅಭ್ಯರ್ಥಿಯನ್ನು ಗೆಲ್ಲಿಸಲು ಶ್ರಮಿಸಿ ಎಂದು ಕರೆ ನೀಡಿದರು.

ಹೈಕೋರ್ಟ್ ಹಿರಿಯ ನ್ಯಾಯವಾದಿ ಬಾಲನ್ ಮಾತನಾಡಿ, ದೇಶದ ಎಲ್ಲ ಹೈಕೋರ್ಟ್‌ಗಳಲ್ಲಿ ಮೀಸಲಾತಿ ಹೆಚ್ಚಿಸಬೇಕು. ನ್ಯಾಯಾಂಗದ ಎಲ್ಲ ಹುದ್ದೆಗಳಲ್ಲಿ ಮೀಸಲಾತಿ ಜಾರಿ ಮಾಡಬೇಕು ಎಂದು ಹೇಳಿದರು.

ನ್ಯಾಯವಾದಿ ಲೋಕನಾಥ್ ಮಾತನಾಡಿ, ಕರಿಕೋಟ್ ಹಾಕಿದವರನ್ನು ಯಾರಿಂದಲೂ ಮುಟ್ಟಲು ಸಾಧ್ಯವಿಲ್ಲ, ನಮ್ಮಲ್ಲಿ ಜ್ಞಾನ , ಬುದ್ಧಿ, ಕೌಶಲ್ಯವಿದೆ. ಆದರೆ ನಾವು ಒಗ್ಗಟ್ಟಾಗದಿದ್ದರೆ ಬೆಳೆಯಲು ಆಗುವುದಿಲ್ಲ ಎಂದು ಹೇಳಿದರು. ಆನೇಕಲ್ ವಕೀಲರ ಅಧ್ಯಕ್ಷರಾದ ಘಟಾಘಟ್ ಪ್ರಕಾಶ್ ಮಾತನಾಡಿದರು.

ಸಮಾರಂಭದಲ್ಲಿ ಸಂಘದ ಉಪಾಧ್ಯಕ್ಷ ಡಾ.ವೆಂಕಟೇಶ್ ಕೆ.ಪಿ., ಪ್ರಧಾನ ಕಾರ್ಯದರ್ಶಿ ಮುನಿರಾಜ್ ಎಸ್.ಎಂ, ಖಜಾಂಚಿ ಟಿ.ಎಲ್ .ನಾಗರಾಜು, ನ್ಯಾ.ಜ್ಯೋತಿ ಮಳಲಿ, ಮಂಜುಳ ಟಿ., ಮೋಹನ್ ಕುಮಾರ್, ಚಿಕ್ಕವೆಂಟಯ್ಯ , ನಾಗರಾಜ್, ಪ್ರವೀಣ ಮುಗುಳಿ, ಕೆ.ವೆಂಕಟೇಶ್, ಹೊಸಕೋಟೆ ಕೃಷ್ಣಪ್ಪ ಹಾಗೂ ಸಂಘದ ಎಲ್ಲ ಪದಾಧಿಕಾರಿಗಳು, ಸದಸ್ಯರು ಭಾಗವಹಿಸಿದ್ದರು.

> ನಾನು ಬಾಬಾ ಸಾಹೇಬರ ಆಶಯದಂತೆ ಬೆಳೆದು ಬಂದವನು. ನನ್ನ ಸಿನಿಮಾಗಳಲ್ಲೂ ಅವರ ಆಶಯಗಳನ್ನು ತೋರಿಸುವ ಕೆಲಸವನ್ನು ಮಾಡಿದ್ದೇನೆ.
> – ಜಡೇಶ್, ಚಲನಚಿತ್ರ ನಿರ್ದೇಶಕ

ಗಜಲ್ ಕಮ್ಮಟ ಸಂಭ್ರಮ

ಉದಯಕಾಲ ನ್ಯೂಸ್, ಬೆಂಗಳೂರು: ಕರ್ನಾಟಕ ಗಜಲ್ ಅಕಾಡೆಮಿ ವತಿಯಿಂದ ಬೆಂಗಳೂರಿನ ವಿಜಯನಗರ ಶಾಸಕರ ಕಚೇರಿಯಲ್ಲಿ ಗಜಲ್ ತರಬೇತಿ ಶಿಬಿರ ಮತ್ತು ಗಜಲ್ ಗೋಷ್ಠಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ನಾಟಕಕಾರರು ಮತ್ತು ಸಿನಿಮಾ ನಿರ್ಮಾಪಕ ಡಾ.ರಾಜಪ್ಪ ದಳವಾಯಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕರ್ನಾಟಕ ಗಜಲ್ ಅಕಾಡೆಮಿಯ ಅಧ್ಯಕ್ಷ ರಂಗಸ್ವಾಮಿ ಸಿದ್ದಯ್ಯ ಅವರು ಅಧ್ಯಕ್ಷತೆ ವಹಿಸಿದ್ದರು. ಕಾರ್ಯದರ್ಶಿ ಮಹಿಪಾಲ್ ರೆಡ್ಡಿ ಸ್ವಾಗತ ಅವರು ಪ್ರಸ್ತಾವನೆ ನೀಡಿದರು. ಖ್ಯಾತ ಗಜಲ್ಕಾರರಾದ ಡಾ. ಕಾಶಿನಾಥ್ ಅಂಬಲಗಿ ಮತ್ತು ಸಿಕಂದರ್ ಅಲಿ ತೋರಣಗಲ್ಲು ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಕಮ್ಮಟದಲ್ಲಿ ಹಿರಿಯ ಗಜಲ್ಕಾರರು ಮತ್ತು ವಿಮರ್ಶಕರಾದ ಮೊಹಮ್ಮದ್ ಬಡ್ಡೂರ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಮಾರ್ಗದರ್ಶನ ನೀಡಿದರು. ಗಜಲ್ ಗೋಷ್ಠಿಯ ಅಧ್ಯಕ್ಷತೆಯನ್ನು ಗಜಲ್ ಕವಿ ಹಾ.ಮ. ಸತೀಶ್ ವಹಿಸಿದ್ದರು. ರಾಜ್ಯ ಸಾಹಿತ್ಯ ಅಕಾಡೆಮಿ ಸದಸ್ಯ ಸಿದ್ದರಾಮ ಹೊನ್ಕಲ್, ಮಂಡಲಗಿರಿ ಪ್ರಸನ್ನ, ಅಬ್ದುಲ್ ಹೈ ತೋರಣಗಲ್ಲು, ನರಸಿಂಹ, ಸುವರ್ಣ ರಾಠೋಡ್ ಯಾದಗಿರಿ, ರಮ್ಯಾ ಜಿ ಮೂರ್ನಾಡು ಕೊಡಗು, ನಾಗರತ್ನ ಲಕ್ಷ್ಮೀಪುರ, ಸಾವಿತ್ರಮ್ಮ, ವಿಜಯ ನಿರ್ಮಲ, ಡಾ. ಸುನೀಲ್ ಕುಮಾರ್ ಎಸ್. ಡಾ.ಹಸೀನಾ ಖಾದ್ರಿ, ಶಿವಮೊಗ್ಗ ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ 20ಕ್ಕೂ ಹೆಚ್ಚು ಕವಿಗಳು ಮತ್ತು ಸಾಹಿತ್ಯಾಸಕ್ತರು ಭಾಗವಹಿಸಿದ್ದರು.

ಸಂಚಾರಿ ನಿಯಮ ಉಲ್ಲಂಘನೆಯೇ ಅಪಘಾತಗಳಿಗೆ ಕಾರಣ: ನಿಕಿತಾ

ಉದಯಕಾಲ ನ್ಯೂಸ್, ಯಶವಂತಪುರ: ಚಾಲನಾ ವೃತ್ತಿ ತಾಳ್ಮೆ ಹಾಗೂ ಏಕಾಗ್ರತೆ ಬಯಸುವ ಕಾಯಕವಾಗಿದೆ. ಸಂಚಾರಿ ನಿಯಮಗಳನ್ನು ಪಾಲಿಸುವ ಮೂಲಕ ಸಂಭಾವ್ಯ ಅವಘಡಗಳನ್ನು ತಪ್ಪಿಸಬಹುದು ಎಂದು ಸಂಚಾರ ವಿಭಾಗದ ಎಸಿಪಿ ನಿಕಿತಾ ಹೇಳಿದರು. ರಸ್ತೆ ಸುರಕ್ಷತಾ ಸಪ್ತಾಹದ ಭಾಗವಾಗಿ ರಾಜ್ಯ ಸಾರಿಗೆ ಇಲಾಖೆ ಸಹಯೋಗದಲ್ಲಿ ಎಲ್‌ವಿ ಟ್ರಾವೆಲ್ಸ್ ವತಿಯಿಂದ ಆಯೋಜಿಸಲಾಗಿದ್ದ 'ಸಡಕ್ ಸುರಕ್ಷಾ ಜೀವನ ರಕ್ಷಾ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸುರಕ್ಷಿತ ಪ್ರಯಾಣವನ್ನು ಖಾತ್ರಿ ಪಡಿಸುವ ನಿಟ್ಟಿನಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಹಲವಾರು ಸಂಚಾರಿ ನಿಯಮಗಳನ್ನು ಜಾರಿಗೆ ತಂದಿದೆ ಎಂದರು. ಆರ್ ಟಿ ಒ ಪ್ರವೀಣ್ ಮಾತನಾಡಿ, ಸರ್ಕಾರಿ ವರದಿಗಳ ಪ್ರಕಾರ 2023ನೇ ಸಾಲಿನಲ್ಲಿ 4,80,000 ಕ್ಕಿಂತಲೂ ಹೆಚ್ಚು ಅಪಘಾತ ಪ್ರಕರಣಗಳು ದಾಖಲಾಗಿದೆ. 1,72,890 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ.

ನರಳಿದ ಗೆಳೆಯನನ್ನು ಕೊಂದರು!

ಉದಯಕಾಲ ನ್ಯೂಸ್, ಬೆಂಗಳೂರು: ಮದ್ಯಕ್ಕೆ ಎಳನೀರು ಬೆರೆಸಿಕೊಳ್ಳಲು ತೆಂಗಿನ ಮರ ಹತ್ತಿಸಿದ ವೇಳೆ ಆಯತಪ್ಪಿ ಕೆಳಗೆ ಬಿದ್ದು ಬೆನ್ನು ಮೂಳೆಗೆ ಪೆಟ್ಟು ಮಾಡಿಕೊಂಡ ಸ್ನೇಹಿತನ ಚಿಕಿತ್ಸೆಗೆ ಹತ್ತಾರು ಲಕ್ಷ ಖರ್ಚಾಗುತ್ತದೆ ಎನ್ನುವ ಆತಂಕದಿಂದ ಆತನನ್ನೇ ಕೊಲೆ ಮಾಡಿದ ಆತಂಕಕಾರಿ ಘಟನೆ ಮಾಗಡಿ ತಾಲೂಕಿನ ವಾಜರಹಳ್ಳಿಯಲ್ಲಿ ನಡೆದಿದೆ.



ಹೊಸವರ್ಷದ ಪಾರ್ಟಿ ಮಾಡಲು ತೆರಳಿದ್ದ ಗೆಳೆಯರ ಗುಂಪು, ತಮ್ಮ ಜೊತೆಯಲ್ಲಿದ್ದ ಗೆಳೆಯನನ್ನೇ ನಿರ್ದಯವಾಗಿ ಕೆರೆಯಲ್ಲಿ ಮುಳುಗಿಸಿ ಕೊಲೆ ಮಾಡಿದ ಅಮಾನವೀಯ ಘಟನೆ ಇದಾಗಿದೆ. ಕೊಲೆಯಾದ ಯುವಕ ವಿನೋದ್ ಕುಮಾರ್ (26) ಹಾಗೂ ಆರೋಪಿಗಳಾದ ಸುದೀಪ್ ಮತ್ತು ಪ್ರಜ್ವಲ್ ಮೂವರೂ ಮಾಗಡಿ ತಾಲೂಕಿನ ಕಲ್ಯಾಣಪುರ ಗ್ರಾಮದ ನಿವಾಸಿಗಳಾಗಿದ್ದಾರೆ. ಜನವರಿ 1ರಂದು ಹೊಸವರ್ಷ ಆಚರಣೆಗಾಗಿ ಐವರು ಸ್ನೇಹಿತರು ಜೊತೆಯಲ್ಲಿ ಪಾರ್ಟಿ ಮಾಡಲು ತೆರಳಿದ್ದರು. ಈ ವೇಳೆ ಮದ್ಯಕ್ಕೆ ಎಳನೀರು ಬೆರೆಸಲು ತೀರ್ಮಾನಿಸಿ ವಿನೋದ್ ಕುಮಾರ್‌ನನ್ನು ತೆಂಗಿನ ಮರ ಹತ್ತಿಸಿದ್ದರು. ತೆಂಗಿನ ಮರ ಹತ್ತಿದ ವಿನೋದ್ ಕುಮಾರ್ ಅಯತಪ್ಪಿ ಕೆಳಗೆ ಬಿದ್ದು ಆತನ ಬೆನ್ನುಮೂಳೆ ಮುರಿದು ಗಂಭೀರವಾಗಿ ಗಾಯಗೊಂಡಿದ್ದ. ಚಿಕಿತ್ಸೆಗೆ ಹತ್ತಾರು ಲಕ್ಷ ರೂ. ಖರ್ಚಾಗಬಹುದು ಎಂಬ ಆತಂಕದಿಂದ ಆರೋಪಿಗಳು ಇದರಿಂದ ತಪ್ಪಿಸಿಕೊಳ್ಳಲು ವಿನೋದ್‌ನನ್ನು ಮನೆಗೆ ಬಿಡುತ್ತೇವೆ ಎಂದು ನಂಬಿಸಿ, ಮಾರ್ಗಮಧ್ಯೆ ವಾಜರಹಳ್ಳಿ ಸಮೀಪದ ಕೆರೆಯಲ್ಲಿ ಮುಳುಗಿಸಿ ಕೊಲೆ ಮಾಡಿರುವುದು ಪೊಲೀಸರ ತನಿಖೆಯಲ್ಲಿ ಪತ್ತೆಯಾಗಿದೆ.

ಆರೋಪಿಗಳು ವಿನೋದ್‌ನನ್ನು ಕೆರೆಯಲ್ಲಿ ಮುಳುಗಿಸಿದ ನಂತರ ಆರಾಮವಾಗಿ ಊರಿನಲ್ಲಿ ಓಡಾಡಿದ್ದರು. ಸಂಜೆ ವೇಳೆಗೆ ಮತ್ತೆ ಸ್ಥಳಕ್ಕೆ ಬಂದು ಕೆರೆಯಿಂದ ಮೃತದೇಹವನ್ನು ಹೊರತೆಗೆದು, ತಂತಿಯಿಂದ ಸೈಜುಕಲ್ಲು ಕಟ್ಟಿ ಬಾವಿಗೆ ಎಸೆದಿದ್ದರು. ವಿನೋದ್ ಕುಮಾರ್ ನಾಪತ್ತೆಯಾಗಿರುವ ಬಗ್ಗೆ ಅವರ ಪೋಷಕರು ಕುದೂರು ಪೊಲೀಸ್ ಠಾಣೆಗೆ ದೂರು ನೀಡಿದ್ದರು.